# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 308 |
| ಮಾನ್ಯ ವಿಧಾನ ಪರಿಷತ್ತು ಸದಸ್ಯರ ಹೆಸರು | ಶ್ರೀ ನಿರಾಣಿ ಹಣಮಂತ್ ರುದ್ರಪ್ಪ |
| ಉತ್ತರಿಸಬೇಕಾದ ದಿನಾಂಕ | 07.07.2023 |
| ಉತ್ತರಿಸುವ ಸಚಿವರು | ಮಾನ್ಯ ಸಮಾಜ ಕಲ್ಯಾಣ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ | 2017-18 ರಲ್ಲಿ ಕ್ರೈಸ್ ಅಧೀನದ 30 ವಸತಿ ಶಾಲೆಗಳನ್ನು ಉತ್ತೇಜಿಸಲು ಪದವಿ ಪೂರ್ವ ತರಗತಿಗಳನ್ನು ಪ್ರಾರಂಭಿಸಲಾಗಿದೆಯೇ; ಹಾಗಿದ್ದಲ್ಲಿ, ಸದರಿ ಶಾಲೆಗಳಲ್ಲಿ ಖಾಯಂ/ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರ ಸಂಖ್ಯೆ ಎಷ್ಟು; (ವಿಷಯವಾರು ಮಾಹಿತಿ ನೀಡುವುದು) | 2017-18 ನೇ ಸಾಲಿನಲ್ಲಿ 30 ವಸತಿ ಶಾಲೆಗಳನ್ನು ಪದವಿ ಪೂರ್ವ ಕಾಲೇಜುಗಳನ್ನಾಗಿ ಉನ್ನತಿಕರಿಸಿದ್ದು, ಪ್ರಸ್ತುತ ಕಾರ್ಯನಿರ್ವಹಿಸುತ್ತಿವೆ. ಸದರಿ 30 ಉನ್ನತೀಕರಿಸಿದ ವಸತಿ ಶಾಲೆಗಳ ಪೈಕಿ 10 ಮೇಲ್ದರ್ಜೇಗೇರಿಸಿದ ವಸತಿ ಶಾಲೆಗಳಿಗೆ ಹುದ್ದೆಗಳು ಮಂಜೂರಾಗಿದ್ದು, ಬಾಕಿ 20 ವಸತಿ ಶಾಲೆಗಳಿಗೆ ಹುದ್ದೆಗಳ ಮಂಜೂರಾತಿ ಪ್ರಸ್ತಾವನೆ ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿರುತ್ತದೆ.<br><br>ಸದರಿ ಶಾಲೆಗಳಲ್ಲಿ 10 ಮೇಲ್ದರ್ಜೇಗೇರಿಸಿದ ವಸತಿ ಶಾಲೆಗಳಿಗೆ ಮಾತ್ರ ಹುದ್ದೆಗಳು ಮಂಜೂರಾಗಿದ್ದು, ಸದರಿ ಶಾಲೆಗಳಲ್ಲಿ ಅತಿಥಿ/ಹೊರಸಂಪನ್ಮೂಲ ಏಜೆನ್ಸಿಯಿಂದ ತಾತ್ಕಾಲಿಕವಾಗಿ ಜಿಲ್ಲಾ ಮಟ್ಟದಲ್ಲಿ ನೇಮಕಾತಿ ಮಾಡಿಕೊಂಡು ಶಾಲೆಗಳನ್ನು ನಿರ್ವಹಿಸಲಾಗುತ್ತಿದೆ. |
| ಆ | ಗುತ್ತಿಗೆ ಆಧಾರದ ಮೇಲೆ ಯಾವ ಮಾನದಂಡಗಳ ಮೇಲೆ ನೇಮಕ ಮಾಡಿಕೊಳ್ಳಲಾಗುತ್ತಿದೆ; ಖಾಯಂ ಶಿಕ್ಷಕರ ನೇಮಕಾತಿ ಮಾಡಿಕೊಳ್ಳುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ; ಹಾಗಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಭರ್ತಿ ಮಾಡಿಕೊಳ್ಳಲಾಗುವುದು? | ವಸತಿ ಶಾಲೆಗಳಲ್ಲಿ ಗುತ್ತಿಗೆ ಆಧಾರದಲ್ಲಿ ನೇಮಕಾತಿ ಮಾಡಿಕೊಳ್ಳಲಾಗುತ್ತಿಲ್ಲ. 10 ಮೇಲ್ದರ್ಜೇಗೇರಿಸಿದ ವಸತಿ ಶಾಲೆಗಳಿಗೆ ಮಾತ್ರ ಹುದ್ದೆಗಳು ಮಂಜೂರಾಗಿದ್ದು, ಸದರಿ ಹುದ್ದೆಗಳನ್ನು ಮುಂಬಡ್ತಿಯಿಂದ ಭರ್ತಿ ಮಾಡಿಕೊಳ್ಳಲು ಕ್ರಮವಹಿಸಲಾಗುವುದು. |

ಸಕಇ-ಎಂಡಿಎಸ್/83/2023

(ಡಾ.ಹೆಚ್.ಸಿ. ಮಹದೇವಪ್ಪ)
ಸಮಾಜ ಕಲ್ಯಾಣ ಸಚಿವರು